# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 252 (1813+1818)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮ ಕುರಿತು

(ಅ) ಕಳೆದ 3ವರ್ಷಗಳಲ್ಲಿ ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಆ) ಕಳೆದ 3 ವರ್ಷಗಳಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಕೈಗೊಂಡಿರುವ ಪ್ರವಾಸೋದ್ಯಮ ಯೋಜನೆಗಳು ಯಾವುವು; ಸದರಿ ಯೋಜನೆಗಳ ಅನುಷ್ಠಾನಕ್ಕೆ ಪ್ರವಾಸೋದ್ಯಮ ಇಲಾಖೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಇದರಲ್ಲಿ ವೆಚ್ಚವಾದ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಪ್ರವಾಸಿಗರು ತಂಗಲು ಇಲಾಖೆ ವತಿಯಿಂದ ಎಷ್ಟು ಯಾತ್ರಿ ನಿವಾಸಿಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು)

(ಈ) ಟೂರಿಸ್ಟ್ ಟ್ಯಾಕ್ಸಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತವೆಷ್ಟು; ಸಹಾಯಧನ ಮಂಜೂರಾತಿಗಾಗಿ ಅನುಸರಿಸುತ್ತಿರುವ ಮಾನದಂಡಗಳೇನು;

(ಉ) ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಜನ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ ಸೌಲಭ್ಯವನ್ನು ನೀಡಲಾಗಿದೆ? (ವಿವರಗಳನ್ನು ನೀಡುವುದು)